ದಿನಾಂಕಃ 09.06.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವೆರದ ಪಾಟೀ ಸವಾಲು: ವಾದಿ ಪರ ಶ್ರೀ ಎಂ.ವಿ.ಜೆ. ವಕೀಲರಿಂದ:**

ವಾದಿಯವರ ಸೋದರ ನನ್ನ ವಿರುದ್ಧ ದಾಖಲಿಸಿದ್ದ ಪ್ರಕರಣದ ಆದೇಶ ಪ್ರತಿಗಳನ್ನು ನಾನು ಮುಂದಿನ ದಿನಗಳಲ್ಲಿ ನಾನು ನ್ಯಾಯಾಲಯಕ್ಕೆ ಹಾಜರುಪಡಿಸುತ್ತೇನೆ. ಸದರಿ ಪ್ರಕರಣದಲ್ಲಿ ನನ್ನ ವಿರುದ್ಧವಾಗಿ ತೀರ್ಪು ಆಗಿದ್ದು ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಪ್ರಕರಣವು ನನ್ನ ವಿರುದ್ಧವಾಗಿ ಡಿಕ್ರಿ ಆಗಿದ್ದರೂ ಸಹಾ ನ್ಯಾಯಾಲಯದ ದಿಕ್ಕನ್ನು ಬದಲಾಯಿಸುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ವಾದಿಯವರ ಸೋದರ ನನ್ನ ಮತ್ತು ಸುರೇಂದ್ರ ಎಂಬುವವರ ವಿರುದ್ಧ ದಾಖಲು ಮಾಡಿದ್ದ ಪ್ರಕರಣದ ಆದೇಶದ ದೃಢೀಕೃತ ಪ್ರತಿ ಎಂದರೆ ಗುರುತಿಸಲು ನಿರಾಕರಿಸಿರುತ್ತಾರೆ. ಸದರಿ ಪ್ರರಕಣವನ್ನು ಹಿರಿಯ ಸಿವಿಲ್ ನ್ಯಾಯಾಧೀರವರ ನ್ಯಾಯಾಲಯದಲ್ಲಿ ಪ್ರಶ್ನಿಸಿರುತ್ತೇನೆ ಎಂದರೆ ಸರಿ. ಹಿರಿಯ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ ನನ್ನ ವಿರುದ್ಧ ತೀರ್ಪು ಬಂದಿದ್ದ ಕಾರಣ ಅದನ್ನು ಪ್ರಶ್ನಿಸಿರುತ್ತೇನೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಅದರ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ ಎಂದು ನುಡಿಯುತ್ತಾರೆ. ಹಿರಿಯ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ ದಾಖಲಿಸಿರುವ ದಾಖಲಾತಿಗಳಲ್ಲಿ ನಾನೇ ಸಹಿ ಮಾಡಿರುತ್ತೇನೆ ಎಂದರೆ ಸರಿ.

ಸದರಿ ಮೇಲ್ಮನವಿ ಪತ್ರದಲ್ಲಿ ಇರುವ ಅಂಶಗಳ ಬಗ್ಗೆ ನಾನು ಓದಿ ತಿಳಿದುಕೊಂಡಿರುವುದಿಲ್ಲ. ನಾನು ಓದುವ ಮೊದಲು ಯಾವುದೇ ದಾಖಲಾತಿಗೆ ಸಹಿ ಮಾಡುವುದಿಲ್ಲ. ಮೇಲ್ಮನವಿ ಪತ್ರದಲ್ಲಿ ನಮೂದಿಸಿರುವ ಅಂಶಗಳ ಬಗ್ಗೆ ನನ್ನ ವಕೀಲರು ನನಗೆ ಓದಿ ತಿಳಿಸಿರುತ್ತಾರೆ. ವಾದಿಯವರ ಸೋದರ ನಮ್ಮ ವಿರುದ್ಧ ಕೂಡಿದ್ದ ಪ್ರಕರಣದ ಆದೇಶವನ್ನು ಪ್ರಶ್ನಿಸಿ ನಾವು ಸದರಿ ಮೇಲ್ಮನವಿಯನ್ನು ದಾಖಲು ಮಾಡಿರುತ್ತೇವೆ. ವಾದಿಯ ಸಹೋದರ ನನ್ನ ವಿರುದ್ಧ ಹೂಡಿದ್ದ ಪ್ರಕರಣದ ಬಗ್ಗೆ ಒಪ್ಪಿಕೊಂಡರೆ ಈ ಪ್ರಕರಣದಲ್ಲಿ ಅನಾನುಕೂಲವಾಗುತ್ತದೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ಬರೆದಿರುವ ಅಂಶಗಳು ಆಂಗ್ಲ ಭಾಷೆಯಲ್ಲಿ ಇರುವ ಕಾರಣ ನನಗೆ ಓದಲು ಬರುವುದಿಲ್ಲ. ಅದರಲ್ಲಿ ಬರವಣಿಗೆ ಮಾಡಿರುವ ಅಂಶಗಳ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ನನ್ನ ಪರವಾಗಿ ನ್ಯಾಯಾಲಯಕ್ಕೆ ಸಲ್ಲಿಸಿರುವ ಪ್ರತಿವಾದ ಪತ್ರವು ಆಂಗ್ಲಾ ಭಾಷೆಯಲ್ಲಿ ಇರುವ ಕಾರಣ ಅದರಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಮಾಹಿತಿ ಇರುವುದಿಲ್ಲ ಮತ್ತು ಅದನ್ನು ಯಾರು, ಯಾವ ಉದ್ದೇಶಕ್ಕಾಗಿ ತಯಾರು ಮಾಡಿರುತ್ತಾರೆ ಎಂದು ನನಗೆ ಮಾಹಿತಿ ಇರುವುದಿಲ್ಲ. ದಿ.13.02.2022 ರಂದು ನಾನು ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ವಾದಿಯವರಿಗೆ ತೊಂದರೆಯನ್ನು ನೀಡಿರುತ್ತೇವೆ ಎಂದರೆ ಸರಿಯಲ್ಲ.

ವಾದಿಯವರು ನಮಗೆ ತೊಂದರೆ ನೀಡಿರುವ ಬಾಬ್ತು ಚಂದ್ರ ರಾಜಯ್ಯ ಎಂಬುವವರ

ವಿರುದ್ಧ ಹಿರಿಯ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ ಪ್ರಶ್ನಿಸಿರುತ್ತೇನೆ. ಪ್ರಸ್ತುತ ಪ್ರಕರಣದ ಸಂಖ್ಯೆ ನನಗೆ ತಿಳಿದಿರುವುದಿಲ್ಲ. ಪ್ರಸ್ತುತ ಪ್ರಕರಣವು ವಾದಿಯವರ ಜಮೀನಿನ ಸ.ನಂ. ಗೆ ಸಂಬಂಧಿಸಿದಂತೆ ಚಾಲ್ತಿಯಲ್ಲಿರುತ್ತದೆ. ದಾವಾ ಜಮೀನಿಗೆ ನಾನು ಮಾಲೀಕನಾಗಿರುವುದಿಲ್ಲ ಎಂದರೆ ಸರಿ. ದಾವಾ ಜಮೀನಿನಲ್ಲಿ ನಾನು ಎಂದಿಗೂ ಸ್ವಾಧೀನಾನುಭವನ್ನು ಹೊಂದಿರುವುದಿಲ್ಲ ಎಂದರೆ ಸರಿ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ಮತ್ತು ಪ್ರತಿವಾದ ಪತ್ರವನ್ನು ವಾದಿಯವರಿಗೆ ತೊಂದರೆ ನೀಡುವ ಉದ್ದೇಶದಿಂದ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.